**<u>ಸಾಕ್ಷಿಗೆ ದಿನಾಂಕಃ 11.11.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತುಃ</u>**

**<u>ಮುಖ್ಯ ವಿಚಾರಣೆ: ಅರ್ಜಿದಾರರ ಪರ ವಕೀಲರಾದ ಶ್ರೀ.KBK ರವರಿಂದಃ</u>**

1) ಈ ಪ್ರಕರಣದಲ್ಲಿ ಇರುವ ಅರ್ಜಿದಾರನು ನನ್ನ ಮಗ ಆಗಿದ್ದಾನೆ ಮತ್ತು ನನ್ನ ಮಗನು ಅಪ್ರಾಪ್ತ ವಯಸ್ಕ ಆಗಿರುವ ಕಾರಣದಿಂದ ಈ ಪ್ರಕರಣವನ್ನು ನನ್ನ ಮಗನ ಪರವಾಗಿ ನಾನು ನಡೆಸುತ್ತಿದ್ದೇನೆ. ನನ್ನ ಮುಖ್ಯ ವಿಚಾರಣೆ ಸಾಕ್ಷ್ಯಕ್ಕೆ ಬದಲಾಗಿ ನಾನು ಈ ದಿನ ನನ್ನ ಸಾಕ್ಷಿ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದೇನೆ. ಸದರಿ ಪ್ರಮಾಣ ಪತ್ರದಲ್ಲಿ ಬರೆದಿರುವ ಅಂಶಗಳು ಸತ್ಯವಾಗಿರುತ್ತವೆ ಮತ್ತು ಅದನ್ನು ನಾನು ಓದಿ ತಿಳಿದುಕೊಂಡು ನನ್ನ ಸಹಿಯನ್ನು ಮಾಡಿರುತ್ತೇನೆ. ಸದರಿ ಪ್ರಮಾಣ ಪತ್ರವನ್ನು ನನ್ನ ಹೇಳಿಕೆಗೆ ಅನುಸಾರವಾಗಿ ನಮ್ಮ ವಕೀಲರು ಸಿದ್ಧಪಡಿಸಿದ್ದಾರೆ.

2) **ಪ್ರಥಮ ವರ್ತಮಾನ ವರದಿ** ಹಾಜರುಪಡಿಸಿದ್ದು ಅದನ್ನು **ನಿ.ಪಿ.1** ಎಂದು, **ಪೋಲಿಸರಿಗೆ ನೀಡಿರುವ ದೂರನ್ನು** ನಿ.ಪಿ.**2** ಎಂದು, **Police Intimation** ಅನ್ನು ನಿ.ಪಿ.**3** ಎಂದು, **ಸ್ಥಳ ಪಂಚನಾಮೆಯನ್ನು** ನಿ.ಪಿ.**4** ಎಂದು, **ಕಚ್ಚಾ ನಕ್ಷೆಯನ್ನು** ನಿ.ಪಿ.**5** ಎಂದು, ಐಎಂವಿ ವರದಿಯನ್ನು ನಿ.ಪಿ.**6** ಎಂದು ಗುರುತಿಸಿದೆ.

3) **ಐ.ಎಂ.ವಿ ಕಾಯ್ದೆ ಕಲಂ 133** ರ ಅಡಿಯಲ್ಲಿ ನೀಡಿರುವಂತಹ **ನೋಟಿಸ್**

ಅನ್ನು ನಿ.ಪಿ.**7** ಎಂದು ಮತ್ತು **ಆ ನೋಟಿಸಿಗೆ ನೀಡಿರುವಂತಹ ಉತ್ತರವನ್ನು** ನಿ.ಪಿ.**8** ಎಂದು**,** ಮತ್ತು **ಗಾಯದ ಪ್ರಮಾಣ ಪತ್ರ**ವನ್ನು ನಿ.ಪಿ.**9** ಎಂದು**,** ಮತ್ತು ಅಂತಿಮ ವರದಿಯನ್ನು ನಿ.ಪಿ.**10** ಎಂದು ಗುರುತಿಸಿದೆ.

**ಸೂಚನೆ:** ನಿ.ಪಿ.1 ರಿಂದ ನಿ.ಪಿ.10 ಎಂದು ಗುರುತು ಆಗಿರುವ ದಾಖಲೆಗಳು Electronic city ಪೋಲಿಸ್ ಠಾಣೆಯವರು ನೀಡಿರುವಂತಹ ಯಥಾ ನಕಲುಗಳು ಆಗಿವೆ.

4) ಅಪಘಾತಕ್ಕೆ ಒಳಗಾದ ಪ್ರಜ್ವಲ್ ರವರ ಆಧಾರ್ ಕಾರ್ಡ್ ಮತ್ತು ಈ ಸಾಕ್ಷಿದಾರರ ಆಧಾರ್ ಕಾರ್ಡ್ ಮತ್ತು ಪ್ರಜ್ವಲ್ ರವರ ಶಾಲಾ ಗುರುತಿನ ಚೀಟಿಯನ್ನು ಮತ್ತು ಇದೇ ದಾಖಲೆಗಳ ಫೋಟೋ ಪ್ರತಿಗಳನ್ನು ಹಾಜರುಪಡಿಸಿದ್ದಾರೆ. ಸದರಿ ಮೂಲ ಪ್ರತಿಗಳನ್ನು ಮತ್ತು ಫೋಟೋ ಪ್ರತಿಗಳನ್ನು ಹೋಲಿಕೆ ಮಾಡಿ ನೋಡಲಾಗಿ ಈ ಮೂಲ ದಾಖಲೆಗಳನ್ನು ಆಧಾರವಾಗಿ ಇಟ್ಟುಕೊಂಡು ಯಾಂತ್ರಿಕ ಸಹಾಯದಿಂದ ಈ ಫೋಟೋ ಪ್ರತಿಗಳನ್ನು ಸಿದ್ಧಪಡಿಸಿದ್ದಾರೆ ಎಂದು ಕಂಡು ಬರುತ್ತದೆ. ಆದ ಕಾರಣದಿಂದ ಸದರಿ ಫೋಟೋ ಪ್ರತಿಗಳನ್ನು ನಿ.ಪಿ.**11** ರಿಂದ ನಿ.ಪಿ.**13** ಎಂದು ಗುರುತಿಸಿದೆ ಮತ್ತು ಮೂಲ ದಾಖಲೆಗಳನ್ನು ಈ ಸಾಕ್ಷಿದಾರರಿಗೆ ವಾಪಸ್ಸು ನೀಡಿದೆ.

5) **ಒಟ್ಟು 3 ಡಿಸ್ಚಾರ್ಜ್ ಸಮ್ಮರಿಗಳನ್ನು** ಹಾಜರುಪಡಿಸಿದ್ದು ಅವುಗಳನ್ನು ನಿ.ಪಿ.**14** ರಿಂದ ನಿ.ಪಿ.**16** ಎಂದು ಗುರುತಿಸಿದೆ.

6) ಒಟ್ಟು **10** ಮೆಡಿಕಲ್ ಬಿಲ್ಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿ.ಪಿ.**17** ಎಂದು ಗುರುತಿಸಿದೆ.

7) **Manipal** ಆಸ್ಪತ್ರೆಯವರು ಪ್ರಜ್ವಲ್ ರವರ ದೇಹಸ್ಥಿತಿಗೆ ಸಂಬಂಧಪಟ್ಟ ಹಾಗೆ ನೀಡಿರುವಂತಹ ವಿವಿದ ರಿಪೋರ್ಟ್ ಗಳ ಒಂದು ಫೈಲ್ ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿ.ಪಿ.**18** ಎಂದು ಗುರುತಿಸಿದೆ.

8) ಒಟ್ಟು **25 X-ray films** ಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿ.ಪಿ.**19** ಎಂದು ಗುರುತಿಸಿದೆ.

**ಈ ಹಂತದಲ್ಲಿ ಮತ್ತೆ ಕೆಲವು ದಾಖಲೆಗಳನ್ನು ಹಾಜರುಪಡಿಸಲು ಸಾಕ್ಷಿದಾರರು ಸಮಯ ಕೇಳಿದ್ದಾರೆ, ಸಮಯ ನೀಡಿದೆ.**

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ)

**(ಓ.ಹೇ.ಕೇ.ಸ.ಇ)**

**ಮುಖ್ಯ ನ್ಯಾಯಾಧೀಶರು,**
ಲಘು ವ್ಯವಹಾರಗಳ ನ್ಯಾಯಾಲಯ,
ಬೆಂಗಳೂರು.